ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**೩೦೬**
ಸದಸ್ಯರ ಹೆಸರು	**ಶ್ರೀ ಅ.ದೇವೇಗೌಡ**
ಉತ್ತರಿಸಬೇಕಾದ ದಿನಾಂಕ	**16-07-2019**
ಉತ್ತರಿಸಬೇಕಾದ ಸಚಿವರು	**ಉನ್ನತ ಶಿಕ್ಷಣ ಸಚಿವರು**

	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅನೇಕ ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಖಾಯಂ ಅಥವಾ ಸೇವಾ ಭದ್ರತೆ ಒದಗಿಸಿ ಕೊಡಲಾಗುವುದೇ;	ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಖಾಯಂ ಅಥವಾ ಸೇವಾ ಭದ್ರತೆ ಒದಗಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.
ಆ)	ಮುಂದಿನ ಅಧ್ಯಾಪಕರ ನೇಮಕಾತಿಯಲ್ಲಿ ಅತಿಥಿ ಉಪನ್ಯಾಸಕರಿಗೆ ಮೊದಲ ಆಧ್ಯತೆಯನ್ನು ಪರೀಕ್ಷೆರಹಿತವಾಗಿ ನೇಮಕಾತಿ ಮಾಡಿಕೊಳ್ಳಲಾಗುವುದೇ;	ಪರೀಕ್ಷೆರಹಿತವಾಗಿ ನೇಮಕಾತಿ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.
ಇ)	2019-20ರ ಸಾಲಿಗೆ ಅತಿಥಿ ಉಪನ್ಯಾಸಕರ ನೇಮಕಾತಿ ಪರಿಗಣನೆಯಲ್ಲಿ, ಹಿಂದಿನ ಸಾಲಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರನ್ನೇ ಮರು ನೇಮಕ ಮಾಡಿಕೊಳ್ಳಲಾಗುವುದೇ;	2019-20ನೇ ಶೈಕ್ಷಣಿಕ ಸಾಲಿನ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ 2018-19ನೇ ಸಾಲಿನಲ್ಲಿ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರನ್ನೇ 2019-20ನೇ ಸಾಲಿನಲ್ಲಿ ಮುಂದುವರೆಸಲಾಗಿದೆ ಮತ್ತು ಸೇವಾ ಹಿರಿತನ ಹಾಗೂ ವಯೋಮಿತಿಯನ್ನು ಪರಿಗಣಿಸಿ, ಅದಕ್ಕನುಗುಣವಾಗಿ ಅಂಕಗಳನ್ನು ನಿಗಧಿಪಡಿಸಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ.
ಈ)	ನಿಯೋಜನೆ ಅಥವಾ ವರ್ಗಾವಣೆ ಮುಖಾಂತರ ಬರುವ ಖಾಯಂ ಉಪನ್ಯಾಸಕರಿಂದ ಹಾಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಆಗುವ ಮಧ್ಯಂತರ ತೊಂದರೆಯನ್ನು ಸ್ಥಗಿತಗೊಳಿಸುವುದು ಯಾವಾಗ?	ನಿಯೋಜನೆ/ವರ್ಗಾವಣೆಯಿಂದ ಕೆಲವು ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಿಗೆ ತೆರವಿನಿಂದ ಅನುಕೂಲ ಮತ್ತು ಸೇರ್ಪಡೆಯಿಂದ ತೊಂದರೆಯಾಗುವ ಪ್ರಕ್ರಿಯೆ ಉದ್ಭವವಾಗುತ್ತದೆ. ತೊಂದರೆಯಾಗುವ ಪರಿಮಾಣ ಕಡಿಮೆ ಮಾಡಲು ಕ್ರಮವಹಿಸಲಾಗುವುದು.
ಉ)	ಇತ್ತೀಚೆಗೆ ಬರುವ ಅಭ್ಯರ್ಥಿಗಳ ಅಂಕಗಳು ಇಂಟರ್‌ನಲ್ ಅಂಕಗಳು ಹೆಚ್ಚಾಗಿದ್ದು, ನಾನ್ ಸೆಮಿಸ್ಟರ್ ಅಭ್ಯರ್ಥಿಗಳ ಅಂಕಗಳು ಇವರಿಗಿಂತ ಕಡಿಮೆ ಇರುವ ಅಭ್ಯರ್ಥಿಗಳ ನೇಮಕಾತಿ ಸಂದರ್ಭದಲ್ಲಿ ಐದು – ಆರು ವರ್ಷಗಳು ಅತಿಥಿ	ಸೇವಾ ಹಿರಿತನ ಹಾಗೂ ವಯೋಮಿತಿಯನ್ನು ಪರಿಗಣಿಸಿ, ಅದಕ್ಕನುಗುಣವಾಗಿ ಅಂಕಗಳನ್ನು ನಿಗಧಿಪಡಿಸಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ. ಇದರಿಂದ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಹೆಚ್ಚಿನ ತಾರತಮ್ಯ ಉಂಟಾಗುವುದಿಲ್ಲ.

	ಉಪನ್ಯಾಸಕರಾಗಿ ಮಾಡಿರುವ ಅಭ್ಯರ್ಥಿಗಳಿಗೆ ಪ್ರಸ್ತುತ ಅಭ್ಯರ್ಥಿಗಳಿಂದ ಸ್ಪರ್ಧಿಸಲು ಆಗದೆ ಹೊರಗುಳಿಯಬಾಗಿದ್ದು; ಈ ಸಮಸ್ಯೆಯನ್ನು ಮನಗಂಡು ಅತಿಥಿ ಉಪನ್ಯಾಸಕರಿಗೆ ಆಧ್ಯತೆಯನ್ನು ನೀಡಿ ಎಂ.ಫಿಲ್. ಪಿಹೆಚ್.ಡಿ. ನೆಟ್ ಸ್ಲೆಟ್ ಆದವರ, ವಯೋಮಿತಿ ಅಂಚಿನಲ್ಲಿರುವವರ, ಖಾಯಂಯಾತಿಗೆ ಆದಷ್ಟು ಬೇಗ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ;	ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಖಾಯಂಮಾತಿಗೆ ನಿಯಮಗಳಲ್ಲಿ ಅವಕಾಶವಿರುವುದಿಲ್ಲ.
ಊ)	ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ 12 ತಿಂಗಳ ಗೌರವಧನವನ್ನು ಕೂಡಲೆ ಮಂಜೂರು ಮಾಡಲಾಗುವುದೇ;	ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತಿ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಖಾಯಂ ಅಧ್ಯಾಪಕರಿಗೆ ಹಂಚಿಕೆ ಮಾಡಿ, ನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಮಾತ್ರ ತಾತ್ಕಾಲಿಕವಾಗಿ 10 ತಿಂಗಳ ಅವಧಿಗೆ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದ್ದು, 12 ತಿಂಗಳ ಗೌರವ ಧನವನ್ನು ಪಾವತಿಸಲು ಅವಕಾಶವಿರುವುದಿಲ್ಲ.
ಋ)	ಎಂ.ಫಿಲ್. ಪಿಹೆಚ್.ಡಿ. ನೆಟ್ ಸ್ಲೆಟ್ ಆದಂತಹ ಅತಿಥಿ ಉಪನ್ಯಾಸಕರನ್ನು ಖಾಯಂ ಮಾಡಿ ಖಾಲಿ ಇರುವ ಹುದ್ದೆಗೆ ಹೊಸ ಅಭ್ಯರ್ಥಿಗಳನ್ನು ಭರ್ತಿ ಮಾಡಿಕೊಳ್ಳುವುದು ಯಾವಾಗ?	ಯು.ಜಿ.ಸಿ. ನಿಯಮಗಳಂತೆ ಸಹಾಯಕ ಪ್ರಾಧ್ಯಾಪಕರ ಹುದ್ದೆಯನ್ನು ನೇರ ನೇಮಕಾತಿ ಮೂಲಕ ತುಂಬಬೇಕಾಗಿರುತ್ತದೆ. ಈಗಾಗಲೇ ಖಾಲಿ ಹುದ್ದೆ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ. ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 153 ಡಿಸಿಇ 2019